617 (633) ಶ್ರೀ ಅಕ್ಕಿ ಮಲ್ಲಿಕಾರ್ಜುನ ಸಹದೇವಪ್ಪ (ಕುಂದಗೋಳ) – ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯೆಯಿಟ್ಟು ಉತ್ತರಿಸುವರೇ ?

ಅ) ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ವೈದ್ಯರುಗಳನ್ನು ಭರ್ತಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

ಆ) ಖಾಲಿಯಿರುವ ಆಯಾಗಳ ಹುದ್ದೆಗಳೆಷ್ಟು , ಆಯಾ ಹುದ್ದೆಗಳನ್ನು ತುಂಬಲು ಅನುಸರಿಸುವ ಮಾನದಂಡವೇನು ?

ಇ) ರಾಜ್ಯದಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳ ದುರಸ್ಥಿಗಾಗಿ ಸರ್ಕಾರ ಮೀಸಲಿಟ್ಟಿರುವ ಹಣವೆಷ್ಟು ? (ವಿವರ ನೀಡುವುದು)

ಶ್ರೀ ಆರ್ ಅಶೋಕ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) –

ಅ) ವಿಶೇಷ ನೇರ ನೇಮಕಾತಿ ಸಮಿತಿ ಮುಖಾಂತರ 500 ವೈದ್ಯಾಧಿಕಾರಿಗಳ ಹುದ್ದೆ ಭರ್ತಿ ಮಾಡಲು ಸರ್ಕಾರದಿಂದ ಅನುಮತಿ ದೊರೆತಿದ್ದು ಮೊದಲನೇ ಹಂತದಲ್ಲಿ 250 ವೈದ್ಯಾಧಿಕಾರಿಗಳನ್ನು ಆಯ್ಕೆ ಮಾಡಲಾಗಿದೆ 2ನೇ ಹಂತದಲ್ಲಿ 250 ವೈದ್ಯಾಧಿಕಾರಿಗಳ ಹುದ್ದೆಗಳನ್ನು ಭರ್ತಿ ಮಾಡಲು ನೇಮಕಾತಿ ಪ್ರಕ್ರಿಯೆ ಅಂತಿಮ ಹಂತದಲ್ಲಿರುತ್ತದೆ

ಖಾಲಿ ಇರುವ ವೈದ್ಯಾಧಿಕಾರಿಗಳ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಿಕೊಳ್ಳಲು ಜಿಲ್ಲಾಧಿಕಾರಿಗಳಿಗೆ ಅಧಿಕಾರ ನೀಡಲಾಗಿದೆ

ಆ) ಇಲಾಖೆಯಲ್ಲಿ ಆಯಾ ಹುದ್ದೆಗಳೆಂದು ಮಂಜೂರಾಗಿರುವುದಿಲ್ಲ ಗ್ರೂಪ್ 'ಡಿ' ಹುದ್ದೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಮಹಿಳಾ ಸಿಬ್ಬಂದಿಗಳನ್ನೇ ಆಯಾಗಳೆಂದು ಕರೆಯಲಾಗುತ್ತದೆ

ಗ್ರೂಪ್ 'ಡಿ' ಹುದ್ದೆಗಳನ್ನು ಭರ್ತಿ ಮಾಡಲು ನಿರ್ಬಂಧ ವಿಧಿಸಲಾಗಿದೆ ಸದರಿ ಕೆಲಸಗಳನ್ನು ಬಾಹ್ಯ ಮೂಲಗಳಿಂದ ನಿರ್ವಹಿಸಲಾಗುತ್ತಿದೆ

ಇ) ರಾಜ್ಯದಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳ ದುರಸ್ಥಿಗಾಗಿ 2007–08ನೇ ಸಾಲಿನಲ್ಲಿ ರೂ 722 31 ಲಕ್ಷಗಳನ್ನು ಮೀಸಲಿಡಲಾಗಿದೆ ಹಾಗೂ ಎನ್ ಆರ್ ಎಚ್ ಎಂ ಅಡಿಯಲ್ಲಿ ಪ್ರತಿ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ರೂ 75,000 ಗಳನ್ನು ನಿರ್ವಹಣೆಗಾಗಿ ನೀಡಲಾಗಿದೆ ಇದರಲ್ಲಿಯೂ ಸಹ ಸಣ್ಣ ಪುಟ್ಟ ದುರಸ್ತಿಗಳನ್ನು ಮಾಡಿಕೊಳ್ಳಲು ಅವಕಾಶವಿರುತ್ತದೆ

ಪೈಲಟ್ ಯೋಜನೆಯ ವಿವರ

618 (634) ಶ್ರೀ ಅಕ್ಕಿ ಮಲ್ಲಿಕಾರ್ಜುನ ಸಹದೇವಪ್ಪ (ಕುಂದಗೋಳ) – ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯೆಯಿಟ್ಟು ಉತ್ತರಿಸುವರೇ ?

ಅ) ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ ಕೊಳವೆ ಬಾವಿಗಳನ್ನು ಕೊರೆಯಿಸಲು ನೇರವಾಗಿ ಫಲಾನುಭವಿಗಳಿಗೆ ಸರಕಾರ ಹಣ ಒದಗಿಸಲಾಗುವುದೇ,